# ಗುಲಬರ್ಗಾ ವಿದ್ಯುಚ್ಛಕ್ತಿ ಸರಬರಾಜು ಕಂಪನಿ ನಿಯಮಿತ

(ಕರ್ನಾಟಕ ಸರ್ಕಾರದ ಸಂಪೂರ್ಣ ಸ್ವಾಮ್ಯಕ್ಕೊಳ ಪಟ್ಟಿದೆ)

ನಿಗಮ ಕಾರ್ಯಾಲಯ
ಜೆಸ್ಕಾಂ ಕಲಬುರಗಿ

ಸಂಖ್ಯೆ: ಜೆಸ್ಕಾಂ/ಪ್ರ.ವ್ಯ/ಉ.ಲೆ.ನಿ (ಮಾ.ಸಂ.ಅ)/ಕಾನಿಇ(ವಿ)/ಐ.ಟಿ.ಸಿ./ಜಿ-11-1304/2018-19/ 67426-28 ದಿನಾಂಕ: 25 FEB 2019

## ಪ್ರಕಟಣೆ

ರಾಷ್ಟ್ರೀಯ ಶಿಶಿಕ್ಷು (ಆಪ್ರೆಂಟಿಸ್) ತರಬೇತಿ ಯೋಜನೆಯಡಿ (NCVT) ಪ್ರಮಾಣ ಪತ್ರ ಪಡೆದವರಿಗೆ ಒಂದು ವರ್ಷದ ಅವಧಿಯ ಎಲೆಕ್ಟ್ರೀಷಿಯನ್ ವೃತ್ತಿಯಲ್ಲಿ ಶಿಶಿಕ್ಷು (ಆಪ್ರೆಂಟಿಸ್) ತರಬೇತಿಗೆ ಹಾಗೂ (SCVT) ರಾಜ್ಯ ವೃತ್ತಿ ಪ್ರಮಾಣ ಪತ್ರ/ಅಂಕಪಟ್ಟಿ ಪಡೆದವರಿಗೆ 1 ವರ್ಷದ ಅವಧಿಯ ಎಲೆಕ್ಟ್ರೀಷಿಯನ್ ವೃತ್ತಿಯಲ್ಲಿ ಶಿಶಿಕ್ಷು (ಆಪ್ರೆಂಟಿಸ್) ತರಬೇತಿಗೆ ಅರ್ಹ ಶಿಶಿಕ್ಷು ಅಭ್ಯರ್ಥಿಗಳಿಂದ 2018-19ನೇ ಸಾಲಿನ ಆಯ್ಕೆಯ ಬಗ್ಗೆ ಪ್ರಕಟಣೆ.

ಗುಲಬರ್ಗಾ ವಿದ್ಯುತ್ ಸರಬರಾಜು ಕಂಪನಿ, ಕೈಗಾರಿಕ ತರಬೇತಿ ಕೇಂದ್ರ, ಕಲಬುರಗಿ, ಇಲ್ಲಿ ನಡೆಸುವ 2018-19ನೇ ಸಾಲಿನ ಎಲೆಕ್ಟ್ರೀಷಿಯನ್ ವೃತ್ತಿಯಲ್ಲಿ ಶಿಶಿಕ್ಷು (ಅಪ್ರೆಂಟಿಸ್) ತರಬೇತಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಕರೆಯಲಾಗಿದೆ.

1. **ಅಭ್ಯರ್ಥಿ ವಯಸ್ಸು**: ದಿನಾಂಕ: 12.03.2019 ಕ್ಕೆ 16 ವರ್ಷ ಮೇಲ್ಪಟ್ಟು ಮತ್ತು ದಿನಾಂಕ: 12.03.2019 ಕ್ಕೆ 25, ವರ್ಷಕ್ಕಿಂತ ಸಾಮಾನ್ಯ ವರ್ಗ ಮತ್ತು ಇತರೆ ಹಿಂದುಳಿದ ವರ್ಗಗಳು ಮೀರಿರಬಾರದು, ಹಾಗೂ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ವಯಸ್ಸು 12.03.2019 ಕ್ಕೆ 30 ವರ್ಷಕ್ಕಿಂತ ಮೀರಿರಬಾರದು.
2. **ಅಭ್ಯರ್ಥಿಯ ವಿದ್ಯಾರ್ಹತೆ:** ಎಸ್.ಎಸ್.ಎಲ್.ಸಿ. ನಂತರ ಎರಡು ವರ್ಷ ಅವಧಿಯ ಐ.ಟಿ.ಐ. ತರಬೇತಿ ಹೊಂದಿ. ಕುಶಲಕರ್ಮಿ ತರಬೇತಿ ಯೋಜನೆಯಡಿ ನಡೆಸುವ ವೃತ್ತಿ ಪರೀಕ್ಷೆಯ ಎಲೆಕ್ಟ್ರೀಷಿಯನ್ ವೃತ್ತಿಯಲ್ಲಿ ತೇರ್ಗಡೆಯಾಗಿ, ರಾಷ್ಟ್ರೀಯ ವೃತ್ತಿ ಪ್ರಮಾಣ ಪತ್ರ (NCVT) ರಾಜ್ಯ ವೃತ್ತಿ ಪ್ರಮಾಣ ಪತ್ರ (SCVT) ಅಂಕಪಟ್ಟಿ ಹೊಂದಿರುವ ಅಭ್ಯರ್ಥಿಗಳು ಅರ್ಹರಾಗಿರುತ್ತಾರೆ.
3. **ಶಿಶಿಕ್ಷು ವೇತನ:**

   ಅ) ರಾಷ್ಟ್ರೀಯ ವೃತ್ತಿ ಪ್ರಮಾಣ ಪತ್ರ ಪಡೆದ ಅಭ್ಯರ್ಥಿಗಳಿಗೆ (NCVT) ಹಾಗೂ ರಾಜ್ಯ ವೃತ್ತಿ ಪ್ರಮಾಣ ಪತ್ರ ಪಡೆದ ಅಭ್ಯರ್ಥಿಗಳಿಗೆ (SCVT) ಒಂದು ವರ್ಷದ ತರಬೇತಿ ಅವಧಿ: ಮಾಸಿಕ ರೂ. 6520/-

4. **ಇತರೆ ಅರ್ಹತಾ ಮಾನದಂಡಗಳು:**

   - ಅಭ್ಯರ್ಥಿಗಳು ಕನ್ನಡ ಓದಲು ಮತ್ತು ಬರೆಯಲು ತಿಳಿದಿರಬೇಕು.
   - ಕರ್ನಾಟಕ ರಾಜ್ಯದ ಅಭ್ಯರ್ಥಿಗಳಿಗೆ ಮೊದಲು ಆದ್ಯತೆ ನೀಡಲಾಗುವುದು.
   - ಆರೋಗ್ಯವಂತ ದೃಢಕಾಯ ಅಭ್ಯರ್ಥಿಗಳಿಗೆ ಮೊದಲು ಆದ್ಯತೆ ನೀಡಲಾಗುವುದು.
   - ಅಂಗವಿಕಲರು ಅರ್ಜಿಯನ್ನು ಸಲ್ಲಿಸಲು ಅರ್ಹರಿರುವುದಿಲ್ಲ.
   - ಒಂದು ಸಲ ವೃತ್ತಿ ತರಬೇತಿ ಪೂರ್ಣಗೊಳಿಸಿರುವ ಅಭ್ಯರ್ಥಿಗಳಿಗೆ ಪುನಃ ಅವಕಾಶವಿರುವುದಿಲ್ಲ.
   - ತರಬೇತಿಯ ಅವಧಿಯಲ್ಲಿ ಅಭ್ಯರ್ಥಿಗಳು ಕಲಬುರಗಿನಲ್ಲಿ ಊಟ/ವಸತಿ ಹಾಗೂ ಇತರ ವ್ಯವಸ್ಥೆಯನ್ನು ಸ್ವಂತ ಖರ್ಚಿನಲ್ಲಿ ಮಾಡಿಕೊಳ್ಳತಕ್ಕದ್ದು.
   - ತರಬೇತಿಯ ಅವಧಿಯಲ್ಲಿ ತರಬೇತಿ ಸಂಸ್ಥೆಯ ನಿಯಮ/ಶಿಸ್ತು ಪಾಲಿಸತಕ್ಕದ್ದು.

5. **ಅರ್ಜಿ ಸಲ್ಲಿಸುವ ವಿಧಾನ:**

   - ಪೂರ್ಣ ವಿವರವಿರುವ ಸ್ವಯಂ ಲಿಖಿತ ಅಥವಾ ಬೆರಳಚ್ಚು ಮಾಡಿದ ಅರ್ಜಿಗಳನ್ನು ಕೆಳಗೆ ಕಾಣಿಸಿರುವ ಅರ್ಜಿ ನಮೂನೆಯಂತೆ ಎಲ್ಲಾ ದಾಖಲೆಗಳೊಂದಿಗೆ "ಪ್ರಧಾನ ವ್ಯವಸ್ಥಾಪಕರು, (ಆ ಮತ್ತು ಮಾ.ಸಂ.ಅ), ನಿಗಮ ಕಛೇರಿ, ಗುಲಬರ್ಗಾ ವಿದ್ಯುತ್ ಸರಬರಾಜು ಕಂಪನಿ, (ಜೆಸ್ಕಾಂ) ಕಲಬುರಗಿ ರವರಿಗೆ ಸಲ್ಲಿಸತಕ್ಕದ್ದು.